**ಸಾಕ್ಷಿಯನ್ನು ದಿನಾಂಕ 25-03-2026 ರಂದು ಕರೆಸಿ ಸತ್ಯ ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲುಃ- ಪ್ರತಿವಾದಿಯ ಪರ ಶ್ರೀ ಎ ಎಂ ಕೆ ವಕೀಲರಿಂದಃ**

**1.** ಈ ಕೇಸಿನ ವಿಚಾರ ನನಗೆ ಗೊತ್ತು. ಈ ದಾವೆಯನ್ನು ವಾದಿಗಳು ಸಲ್ಲಿಸಿರುತ್ತಾರೆ. ವಾದಿಗಳು ಈ ದಾವೆಯನ್ನು ಯಾವ ಆಸ್ತಿಗೆ ಸಂಬಂಧಿಸಿದಂತೆ ಸಲ್ಲಿಸಿರುತ್ತಾರೆಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಏನು ವ್ಯವಹಾರಗಳು ಆಗಿರುತ್ತವೆ ಎಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿ ಮೂಲತಃವಾಗಿ ಬ್ಯಾಟರಂಗಯ್ಯರವರಿಗೆ ಸೇರಿದ್ದಾಗಿತ್ತು ಎಂದರೆ ಸರಿ. ದಾವಾ ಆಸ್ತಿಯನ್ನು ಬ್ಯಾಟರಂಗಯ್ಯ ಮತ್ತು ಅವರ ತಮ್ಮ ರಂಗರಾಮಾನುಜಯ್ಯರವರು ಕೃಷ್ಣಪ್ಪರವರಿಗೆ ಮಾರಾಟ ಮಾಡಿರುತ್ತಾರೆಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಗೆ ಸಂಬಂಧಿಸಿದಂತೆ **LRF** ಪ್ರಕರಣ ನಡೆದಿರುವ ಬಗ್ಗೆ ನನಗೆ ಗೊತ್ತಿಲ್ಲ. ಎನ್ ವಿ ಪುಟ್ಟಲಕ್ಷ್ಮಯ್ಯ ಯಾರೆಂದು ನನಗೆ ಗೊತ್ತಿಲ್ಲ. ಸದರಿ ಪುಟ್ಟಲಕ್ಷ್ಮಯ್ಯರವರು ಕೃಷ್ಣಪ್ಪರವರಿಂದ ಜಮೀನನ್ನು ಕ್ರಯಕ್ಕೆ ಪಡೆದು ಸ್ವಾಧೀನದಲ್ಲಿರುತ್ತಾರೆಂದರೆ ನನಗೆ ಗೊತ್ತಿಲ್ಲ.

**2.** **9** ನೇ ಪ್ರತಿವಾದಿ ನನಗೆ ಗೊತ್ತಿಲ್ಲ. ದಾವಾ ಆಸ್ತಿಯನ್ನು **9** ನೇ ಪ್ರತಿವಾದಿ ಕ್ರಯಕ್ಕೆ ಪಡೆದು ಅವರೇ ಸ್ವಾಧೀನದಲ್ಲಿರುತ್ತಾರೆಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯಿಂದ **100** ಮೀಟರ್ ದೂರದಲ್ಲಿ ನಮಗೆ ಸೇರಿದ ಸ.ನಂ **48/1**(ಎ) ಇರುತ್ತದೆ. ದಾವಾ ಆಸ್ತಿಯ ಅಕ್ಕಪಕ್ಕದಲ್ಲಿ ನಮಗೆ ಸೇರಿದ ಜಮೀನು ಇರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಹಾಗೂ **9** ನೇ ಪ್ರತಿವಾದಿ ನಡುವೆ ಹಣಕಾಸಿನ ವ್ಯವಹಾರ ಇತ್ತು ಎಂದರೆ ಸರಿಯಲ್ಲ. ನಾನು ಸದರಿ ಹಣದ ವ್ಯವಹಾರದ ಸಲುವಾಗಿ **9** ನೇ ಪ್ರತಿವಾದಿಯ ಗಂಡನಿಗೆ ಒಂದು ಚೆಕ್ಕನ್ನು ನೀಡಿದ್ದು, ಸದರಿ ಚೆಕ್ ನ ಆಧಾರದ ಮೇಲೆ ನನ್ನ ವಿರುದ್ಧ ಬೆಂಗಳೂರಿನ ನ್ಯಾಯಾಲಯದಲ್ಲಿ **CC No. 14254/2018** ರಂತೆ ಪ್ರಕರಣ ದಾಖಲು ಮಾಡಿರುತ್ತಾರೆಂದರೆ ನನಗೆ ಗೊತ್ತಿಲ್ಲ. ಸದರಿ ಪ್ರಕರಣದಲ್ಲಿ ನಾನು ಹಣವನ್ನು ನೀಡುವಂತೆ ಆದೇಶವಾಗಿದ್ದು ನಾನು **9** ನೇ ಪ್ರತಿವಾದಿಯ ಗಂಡನಿಗೆ ಹಣವನ್ನು ನೀಡಿರುತ್ತೇನೆಂದರೆ ಸರಿಯಲ್ಲ. ಆ ಕಾರಣ ನಾನು **9** ನೇ ಪ್ರತಿವಾದಿ ವಿರುದ್ಧ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**3.** ದಾವಾ ಆಸ್ತಿಯನ್ನು ವಾದಿಗಳು ಮತ್ತು ಪ್ರತಿವಾದಿ **1** ರಿಂದ **8** ರವರು ವಿಭಾಗ ಮಾಡಿಕೊಂಡಿರುವುದಿಲ್ಲ. ದಾವಾ ಆಸ್ತಿಯನ್ನು ಬಿಟ್ಟು ವಾದಿ ಮತ್ತು ಪ್ರತಿವಾದಿ **1** ರಿಂದ **8** ರವರ ಕುಟುಂಬಕ್ಕೆ ಬೇರೆ ಆಸ್ತಿಗಳು ಇರುವುದಿಲ್ಲ. ವಾದಿಯ ಕುಟುಂಬದ ವ್ಯವಹಾರದ ಬಗ್ಗೆ ನನಗೆ ಗೊತ್ತು. ದಾವಾ ಆಸ್ತಿಗೆ ಸಂಬಂಧಿಸಿದ ದಾಖಲಾತಿಗಳನ್ನು ನಾನು ನೋಡಿರುವುದಿಲ್ಲ. ದಾವಾ ಆಸ್ತಿಯ ಚಕ್ಕುಬಂದಿ ಗೊತ್ತು. ದಾವಾ ಆಸ್ತಿ ಬಗ್ಗೆ ನನಗೇನು ಗೊತ್ತಿಲ್ಲದೇ ಇದ್ದರೂ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

**ಓದಿ ಹೇಳಿ ಕೇಳಿ ಸರಿ ಇರುತ್ತದೆ.**

**ಸಿ.ಜೆ. ಮತ್ತು ಪ್ರ.ದ.ನ್ಯಾದಂ.**
**ಕೊರಟಗೆರೆ**

O.S.218/2017

PW-2

Witness of the Plaintiff by name Vijay R present, filed affidavit in lieu of chief examination and examined as DW-2.

Sri. HVS prays time.

For cross of DW 2 by 07.04.2026.

Civil Judge and JMFC.

*Koratagere.*